ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ವಿಜಯಪುರ ಮಹಾನಗರ ಪಾಲಿಕೆಯ ಸರ್ಕಾರಿ ಪದವಿಪೂರ್ವ ಕಾಲೇಜು (ಪ್ರೌಢ ಶಾಲೆ ವಿಭಾಗ) ಇಲ್ಲಿ ಅಕ್ರಮವಾಗಿ ನಿರ್ಮಿಸಿರುವ ಮಳಿಗೆಗಳ ಬಗ್ಗೆ

ಶ್ರೀ ಅರುಣ ಶಹಾಪುರ(ಶಿಕ್ಷಕರ ಕ್ಷೇತ್ರ):-

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

160 (1293+1263) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ವಿಜಯಪುರ ಇವರಿಗೆ ಸೇರಿದ ಜಮೀನಿನಲ್ಲಿ ವಾಣಿಜ್ಯ ಮಳಿಗೆಗಳನ್ನು ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಕರಾರು ಒಪ್ಪಂದ ಮಾಡಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಮಳಿಗೆ ಪಡೆದ ವ್ಯಕ್ತಿ ಯಾರ ಜೊತೆ ಕರಾರು ಒಪ್ಪಂದ ಮಾಡಿಕೊಂಡಿರುತ್ತಾರೆ ; (ಒಪ್ಪಂದದ ವಿವರ ನೀಡುವುದು)

(ಆ) ಇದುವರೆಗೂ ಬಾಡಿಗೆಗೆ ನೀಡಲಾಗಿರುವ ಮಳಿಗೆಗಳು ಎಷ್ಟು ; ಠೇವಣಿ ರೂಪದ ಹಣವನ್ನು ಯಾವುದಕ್ಕೆ ಉಪಯೋಗಿಸಲಾಗಿದೆ ;

(ಇ) ಈ ವಾಣಿಜ್ಯ ಮಳಿಗೆ ನಿರ್ಮಾಣಕ್ಕೆ ಶಿಕ್ಷಣ ಇಲಾಖೆಯ ಅನುಮತಿ ಪಡೆಯಲಾಗಿದೆಯೇ ; ಈ ಬಗ್ಗೆ ವ್ಯಾಜ್ಯಗಳೇನಾದರೂ ಇವೆಯೇ ; (ಇದ್ದಲ್ಲಿ ಅವುಗಳ ಮಾಹಿತಿ ನೀಡುವುದು)

(ಈ) ಈ ಪ್ರಕರಣದಲ್ಲಿ ಭಾಗಿಯಾದ ಅಧಿಕಾರಿಗಳ ಮೇಲೆ ಕ್ರಮ ಜರುಗಿಸಲಾಗಿದೆಯೇ? (ಹಾಗಿದ್ದಲ್ಲಿ ಅಧಿಕಾರಿಗಳ ಹೆಸರು ಹುದ್ದೆಯ ಸಂಪೂರ್ಣ ವಿವರ ನೀಡುವುದು)